## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕೋವಿಡ್-19 ಸಾಂಕ್ರಾಮಿಕ ರೋಗದ 2ನೇ ಅಲೆಯ ಹಿನ್ನೆಲೆಯಲ್ಲಿ ಅಸಂಘಟಿತ ಕಾರ್ಮಿಕರಿಗೆ ರೂ. 2,000/- ಪರಿಹಾರ ಧನ ನೀಡುವ ಕುರಿತು.

**ಓದಲಾಗಿದೆ:**
1) ಮಾನ್ಯ ಮುಖ್ಯಮಂತ್ರಿಗಳ ದಿನಾಂಕ: 19/05/2021ರ ಪತ್ರಿಕಾಗೋಷ್ಠಿಯ ಘೋಷಣೆ.
2) ಆಯುಕ್ತರು, ಕಾರ್ಮಿಕ ಇಲಾಖೆ ಇವರ ಪತ್ರ ಸಂಖ್ಯೆ: ಅಸಂಕಾ/ ಇಎಸ್‌ಟಿ/ ಕೋ/ ಸಿ.ಆರ್-11/ 2021-22, ದಿನಾಂಕ: 19/05/2021.
3) ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: FD 14 BRS 2021, ದಿನಾಂಕ: 21/05/2021.
4) ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 331 ವೆಚ್ಚ-9/2021, ದಿನಾಂಕ: 20/05/2021 ಹಾಗೂ 27/05/2021.

******

**ಪ್ರಸ್ತಾವನೆ:-**

ಮೇಲೆ ಕ್ರಮ ಸಂಖ್ಯೆ (1)ರ ಘೋಷಣೆಯಲ್ಲಿ ಸನ್ಮಾನ್ಯ ಮುಖ್ಯ ಮಂತ್ರಿಯವರು ಕರ್ನಾಟಕ ರಾಜ್ಯದಲ್ಲಿ ಕೋವಿಡ್-19ರ ಎರಡನೇ ಅಲೆಯು ವ್ಯಾಪಕವಾಗಿ ಹರಡುತ್ತಿರುವ ಹಿನ್ನೆಲೆಯಲ್ಲಿ, ಪ್ರಸಕ್ತ ನಿರ್ಬಂಧಗಳಿಂದ ಹಲವು ಅಸಂಘಟಿತ ವಲಯಗಳಿಗೆ ಪ್ರತಿಕೂಲ ಪರಿಣಾಮ ಉಂಟಾಗಿದ್ದು, ಪರಿಣಾಮ ತಗ್ಗಿಸಲು ಕಾರ್ಮಿಕ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಅಸಂಘಟಿತ ಕಾರ್ಮಿಕರಾದ ಕ್ಷೌರಿಕರು, ಅಗಸರು, ಟೈಲರ್‌ಗಳು, ಹಮಾಲಿಗಳು, ಚಿಂದಿ ಆಯುವವರು, ಕುಂಬಾರರು, ಭಟ್ಟಿಕಾರ್ಮಿಕರು, ಅಕ್ಕಸಾಲಿಗರು, ಮೆಕ್ಯಾನಿಕ್ ಗಳು, ಕಮ್ಮಾರರು, ಗೃಹ ಕಾರ್ಮಿಕರು ಹಾಗೂ ಚಮ್ಮಾರರು ಸೇರಿದಂತೆ ಒಟ್ಟು 12 ವರ್ಗಗಳ 3.04 ಲಕ್ಷ ಅಸಂಘಟಿತ ಕಾರ್ಮಿಕರಿಗೆ ಒಟ್ಟು ರೂ. 60.89 ಕೋಟಿಗಳ ಮೊತ್ತದಲ್ಲಿ, ತಲಾ ರೂ. 2,000/-ದಂತೆ ಒಂದು ಬಾರಿಯ ನೆರವನ್ನು ನೀಡಲಾಗುವುದೆಂದು ಘೋಷಿಸಿರುತ್ತಾರೆ.

ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ಕಾರ್ಮಿಕ ಆಯುಕ್ತರ ಪತ್ರದಲ್ಲಿ ಕರ್ನಾಟಕ ರಾಜ್ಯದಲ್ಲಿ ಕೋವಿಡ್-19ರ ಎರಡನೇ ಅಲೆಯು ವ್ಯಾಪಕವಾಗಿ ಹರಡುತ್ತಿರುವ ಹಿನ್ನೆಲೆಯಲ್ಲಿ ದಿನಾಂಕ: 27-04-2021 ರಿಂದ ದಿನಾಂಕ: 24-05-2021ರವರೆಗೆ ಕಠಿಣ ನಿಯಮಗಳೊಂದಿಗೆ ಲಾಕ್‌ಡೌನ್ ಜಾರಿಗೊಳಿಸಲಾಗಿರುತ್ತದೆ. ಈ ಲಾಕ್‌ಡೌನ್ ಅವಧಿಯಲ್ಲಿ ಆಹಾರ ಸಾಮಾಗ್ರಿಗಳು, ದಿನಸಿ, ಹಣ್ಣು ಹಾಗೂ ತರಕಾರಿ, ಮೀನು ಮತ್ತು ಮಾಂಸ, ಪಶುಗಳ ಆಹಾರವನ್ನು ಹೊರತು ಪಡಿಸಿ ಎಲ್ಲಾ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳನ್ನು ತೆರೆಯದಿರಲು ಆದೇಶಿಸಲಾಗಿರುತ್ತದೆ. ಈ ಆದೇಶದಿಂದ ಅಸಂಘಟಿತ ಕ್ಷೇತ್ರದಲ್ಲಿ ಕೆಲಸ ನಿರ್ವಹಿಸುತ್ತಿರುವ ಕಾರ್ಮಿಕರು ನಿರುದ್ಯೋಗಿಗಳಾಗಿದ್ದು, ಆರ್ಥಿಕವಾಗಿ ಸಂಕಷ್ಟಕ್ಕೊಳಗಾಗಿರುತ್ತಾರೆ.

ಮುಂದುವರೆದು, ಗೌರವಾನ್ವಿತ ಉಚ್ಚನ್ಯಾಯಾಲಯದಲ್ಲಿ ದಾಖಲಾದ ಪ್ರಕರಣ W.P.No.6435/2020 (PIL) order dated 05-05-2021ರ ಕಂಡಿಕೆ 21 ರಲ್ಲಿ ಮಾನ್ಯ ಉಚ್ಚನ್ಯಾಯಾಲಯವು ಈ ಕೆಳಗಿನಂತೆ ಮಧ್ಯಂತರ ಆದೇಶವನ್ನು ಹೊರಡಿಸಿದೆ.

*"As regards the issue of food security to the sections of the society which have become vulnerable due to partial lockdown declared by the State*

...2

*Government, our attention is invented by the learned council appearing for the parties to the various orders passed by this court starting from 30th April 2020 to 16th July 2020. The benefits under the said orders shall be extended to this class of the society. The learned advocate general assured the court that State Government will look into the issue and will come out with an appropriate decision before the court at the earliest."*

ಮೇಲ್ಕಂಡ ಪ್ರಕರಣದಲ್ಲಿ ಮಾನ್ಯ ಉಚ್ಚ ನ್ಯಾಯಾಲಯವು W.P.No.6435/2020 (PIL) ರ ವಿಚಾರಣೆಯ ಸಂದರ್ಭದಲ್ಲಿ, ಕರ್ನಾಟಕ ರಾಜ್ಯದ ಅಡ್ವೋಕೇಟ್ ಜನರಲ್‌ರವರು ಈ ಕುರಿತು ಸರ್ಕಾರದ ಸೂಕ್ತ ನಿರ್ಣಯದೊಂದಿಗೆ ಹಾಜರಾಗುವುದಾಗಿ ಭರವಸೆ ನೀಡಿದ್ದು, ಅಸಂಘಟಿತ ವರ್ಗಗಳ ಕಾರ್ಮಿಕರು ಕೋವಿಡ್-19ರ ಲಾಕ್‌ಡೌನ್ ಜಾರಿಯ ಕಾರಣ ನಿರುದ್ಯೋಗ ಸಮಸ್ಯೆಯಿಂದಾಗಿ ಆರ್ಥಿಕವಾಗಿ ಸಂಕಷ್ಟವನ್ನು ಎದುರಿಸುತ್ತಿದ್ದು, ಸರ್ಕಾರವು ಸೂಕ್ತ ನೆರವು ಘೋಷಿಸಬೇಕಾದ ಅವಶ್ಯಕತೆ ಇರುತ್ತದೆ. ಒಂದು ತಿಂಗಳಿಗೂ ಹೆಚ್ಚಿನ ಅವಧಿಯ ನಿರಂತರ ಲಾಕ್‌ಡೌನ್‌ನಿಂದ ಯಾವುದೇ ಆರ್ಥಿಕ ಆದಾಯವಿಲ್ಲದೆ ಈ ವರ್ಗಕ್ಕೆ ಸೇರಿದ ಕಾರ್ಮಿಕರು ಹಾಗೂ ಅವರ ಕುಟುಂಬದ ಸದಸ್ಯರ ಜೀವನ ನಿರ್ವಹಣೆಗೆ ತೊಂದರೆಯಾಗುತ್ತದೆ. ಈ ಹಿನ್ನಲೆಯಲ್ಲಿ ಲಾಕ್‌ಡೌನ್ ಅವಧಿಯಲ್ಲಿ ಈ ಕಾರ್ಮಿಕರು ಹಾಗೂ ಅವರ ಕುಟುಂಬದವರಿಗೆ ಜೀವನ ನಿರ್ವಹಣೆಗೆ ಅನುಕೂಲವಾಗುವಂತೆ ತುರ್ತಾಗಿ ಆರ್ಥಿಕ ನೆರವು ನೀಡುವುದು ಸೂಕ್ತವಾಗಿರುತ್ತದೆ.

ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯು 11 ವರ್ಗಗಳಾದ ಅಗಸರು, ಕ್ಷೌರಿಕರು, ಮನೆಗೆಲಸದವರು, ಟೈಲರ್ಸ್, ಮೆಕ್ಯಾನಿಕ್, ಚಿಂದಿ ಆಯುವವರು, ಹಮಾಲರು, ಅಕ್ಕಸಾಲಿಗರು, ಕಮ್ಮಾರರು, ಕುಂಬಾರರು ಹಾಗೂ ಭಟ್ಟಿಕಾರ್ಮಿಕ ವರ್ಗಗಳ ಅಸಂಘಟಿತ ಕಾರ್ಮಿಕರನ್ನು ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆಯಡಿ ನೋಂದಾಯಿಸಿ ಸ್ಮಾರ್ಟ್‌ಕಾರ್ಡ್ ವಿತರಿಸುತ್ತಿದ್ದು, ಈವರೆಗೆ ಸುಮಾರು 3.04 ಲಕ್ಷ ಕಾರ್ಮಿಕರ ಮಾಹಿತಿ ಲಭ್ಯವಿರುತ್ತದೆ. ಇದಲ್ಲದೇ, ಕಳೆದ ಒಂದು ವಾರದ ಅವಧಿಯಲ್ಲಿ ಸದರಿ ಯೋಜನೆಯಡಿ ನೋಂದಣಿಗಾಗಿ ಸುಮಾರು 26,000 ಅರ್ಜಿಗಳು ಸ್ವೀಕೃತಗೊಂಡಿದ್ದು, ಒಟ್ಟು ಅಸಂಘಟಿತ ಕಾರ್ಮಿಕರ ಸಂಖ್ಯೆ ಸುಮಾರು 3.30 ಲಕ್ಷ ಲಭ್ಯವಿರುತ್ತದೆ. ಸನ್ಮಾನ್ಯ ಮುಖ್ಯ ಮಂತ್ರಿಯವರು ಘೋಷಿಸಿದ 12 ವರ್ಗಗಳಲ್ಲಿ ಮಂಡಳಿಯಲ್ಲಿ ಮಾಹಿತಿ ಲಭ್ಯವಿರುವ 11 ವರ್ಗಗಳ ಸುಮಾರು 3.30 ಲಕ್ಷ ಅಸಂಘಟಿತ ಕಾರ್ಮಿಕರಿಗೆ ತಲಾ ರೂ. 2,000/-ಗಳ ಒಂದು ಬಾರಿಯ ನೆರವನ್ನು ವಿತರಿಸಲು ರೂ. 66.08 ಕೋಟಿ ಅನುದಾನದ ಅವಶ್ಯಕತೆ ಇರುತ್ತದೆ.

ಸದರಿ ಪ್ರಸ್ತಾಪಿತ ವೆಚ್ಚವನ್ನು ಭರಿಸಲು ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯಲ್ಲಿ ಪ್ರಸ್ತುತ ಯಾವುದೇ ಅನುದಾನ ಲಭ್ಯವಿರುವುದಿಲ್ಲ. ಆದುದರಿಂದ, ಲಭ್ಯವಿರುವ 11 ವರ್ಗಗಳ ಅಸಂಘಟಿತ ಕಾರ್ಮಿಕರಿಗೆ ಒಂದು ಬಾರಿಯ ನೆರವು ನೀಡಲು ತಗಲುವ ವೆಚ್ಚವನ್ನು ಭರಿಸಲು ಸರ್ಕಾರದಿಂದ ರೂ. 66.09 ಕೋಟಿಗಳ ಹೆಚ್ಚುವರಿ ಅನುದಾನ ಹಾಗೂ ಅಂದಾಜಿಸಲಾಗಿರುವಂತೆ ಸುಮಾರು 50,000 ಚಮ್ಮಾರ ವೃತ್ತಿಯಲ್ಲಿ ತೊಡಗಿಕೊಂಡ ಕಾರ್ಮಿಕರಿಗೆ ಒಂದು ಬಾರಿ ನೆರವು ನೀಡಲು ಪ್ರತ್ಯೇಕ ರೂ.10.00 ಕೋಟಿಗಳು ಸೇರಿದಂತೆ ಒಟ್ಟು ರೂ.76.09 ಕೋಟಿಗಳ ಹೆಚ್ಚುವರಿ ಅನುದಾನವನ್ನು ಒದಗಿಸಬೇಕೆಂದು ಕೋರಿರುತ್ತಾರೆ.

...3

W

ಮೇಲೆ ಕ್ರ.ಸಂ. (3) ರಲ್ಲಿ ಓದಲಾದ ಆದೇಶದಲ್ಲಿ 2021-22ನೇ ಸಾಲಿಗೆ ಕೋವಿಡ್ ವಿಶೇಷ ಪ್ಯಾಕೇಜ್ ಸಲುವಾಗಿ ರೂ. 3110.25 ಲಕ್ಷಗಳನ್ನು ಲೆಕ್ಕಶೀರ್ಷಿಕೆ 2230-01-102-0-01-ಕಾರ್ಖಾನೆಗಳ ಪರಿವೀಕ್ಷಕರು-059-ಇತರೆ ಖರ್ಚುಗಳಡಿ ಹೆಚ್ಚುವರಿಯಾಗಿ ಮಂಜೂರು ಮಾಡಲಾಗಿರುತ್ತದೆ.

ಸನ್ಮಾನ್ಯ ಮುಖ್ಯಮಂತ್ರಿಗಳ ಪತ್ರಿಕಾಗೋಷ್ಠಿಯ ಘೋಷಣೆ ಹಾಗೂ ಮೇಲೆ ಕ್ರ.ಸಂ. (4) ರಲ್ಲಿ ಓದಲಾದ ಆರ್ಥಿಕ ಇಲಾಖೆಯ ಟಿಪ್ಪಣಿಯನ್ವಯ, ಆಯುಕ್ತರು, ಕಾರ್ಮಿಕ ಇಲಾಖೆ ಇವರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕಾಇ 221 ಎಲ್‌ಇಟಿ 2021, ದಿನಾಂಕ: 28/05/2021**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳನ್ವಯ, ಕೋವಿಡ್-19ರ ಎರಡನೇ ಅಲೆಯ ಹಿನ್ನೆಲೆಯಲ್ಲಿ, ಪ್ರಸಕ್ತ ನಿರ್ಬಂಧಗಳಿಂದ ಹಲವು ಅಸಂಘಟಿತ ವಲಯಗಳಿಗೆ ಪ್ರತಿಕೂಲ ಪರಿಣಾಮ ಉಂಟಾಗಿದ್ದು, ದೈನಂದಿನ ಉದ್ಯೋಗವನ್ನು ನಡೆಸಲಾಗದೆ ಆದಾಯವನ್ನು ಕಳೆದುಕೊಂಡಿರುವ ಅಸಂಘಟಿತ ಕಾರ್ಮಿಕರಾದ ಅಗಸರು, ಕ್ಷೌರಿಕರು, ಗೃಹ ಕಾರ್ಮಿಕರು, ಟೈಲರ್‌ಗಳು, ಮೆಕ್ಯಾನಿಕ್, ಚಿಂದಿ ಆಯುವವರು, ಹಮಾಲರು, ಅಕ್ಕಸಾಲಿಗರು, ಕಮ್ಮಾರರು, ಕುಂಬಾರರು ಹಾಗೂ ಭಟ್ಟಿ ಕಾರ್ಮಿಕರು ಸೇರಿದಂತೆ, ಒಟ್ಟು 11 ವರ್ಗಗಳ ಒಟ್ಟು 3.30 ಲಕ್ಷ (ನೋಂದಣಿಗಾಗಿ ಸ್ವೀಕೃತಗೊಂಡಿರುವ ಸುಮಾರು 26,000 ಅರ್ಜಿಗಳು ಸೇರಿದಂತೆ) ಕಾರ್ಮಿಕರಿಗೆ ತಲಾ ರೂ. 2,000/- ದಂತೆ (ಎರಡು ಸಾವಿರ ರೂಪಾಯಿಗಳು ಮಾತ್ರ) ಒಂದು ಬಾರಿಯ ಸಹಾಯಧನವನ್ನು ಒಟ್ಟು ರೂ. 66.09 ಕೋಟಿಗಳ (ಅರವತ್ತಾರು ಕೋಟಿ ಒಂಬತ್ತು ಲಕ್ಷ ರೂಪಾಯಿಗಳು ಮಾತ್ರ) ವೆಚ್ಚದಲ್ಲಿ ನೀಡಲು ಈ ಆದೇಶದೊಂದಿಗೆ ಲಗತ್ತಿಸಿರುವ ಅನುಬಂಧ-1 ರಲ್ಲಿನ ಷರತ್ತುಗಳು ಮತ್ತು ಅನುಬಂಧ-2 ರಲ್ಲಿರುವ ಮಾರ್ಗಸೂಚಿಗಳಿಗೊಳಪಟ್ಟು ಮಂಜೂರು ಮಾಡಲಾಗಿದೆ.

ಇದಕ್ಕೆ ತಗಲುವ ವೆಚ್ಚವನ್ನು ಈ ಕೆಳಕಂಡ ಲೆಕ್ಕ ಶೀರ್ಷಿಕೆಗಳಡಿ ಭರಿಸತಕ್ಕದ್ದು.

| | |
|---|---|
| 2230-01-102-0-01-059 ಕಾರ್ಖಾನೆಗಳ ಪರಿವೀಕ್ಷಕರು ಲೆಕ್ಕಶೀರ್ಷಿಕೆಯಡಿ ಆಯವ್ಯಯದಲ್ಲಿ ಒದಗಿಸಿರುವ ಅನುದಾನ | ರೂ.3123.75 ಲಕ್ಷ |
| 2230-01-111-0-05 ರಡಿ ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಗೆ ಒದಗಿಸಿರುವ ಅನುದಾನ | ರೂ.375.00 ಲಕ್ಷ |
| 2230-01-102-0-01-059 ಕಾರ್ಖಾನೆಗಳ ಪರಿವೀಕ್ಷಕರು ಲೆಕ್ಕಶೀರ್ಷಿಕೆಯಡಿ ಹೆಚ್ಚುವರಿಯಾಗಿ ಒದಗಿಸಿರುವ ಅನುದಾನ | ರೂ.3110.25 ಲಕ್ಷ |
| **ಒಟ್ಟು ಮೊತ್ತ** | **ರೂ.6609.00 ಲಕ್ಷ** |

ಮುಂದುವರೆದು, ಲೆಕ್ಕ ಶೀರ್ಷಿಕೆ: 2230-01-102-0-01 ರಡಿ ಕಾರ್ಖಾನೆಗಳ ಪರಿವೀಕ್ಷಕರು ಸದರಿ ಅನುದಾನವನ್ನು ಖಜಾನೆಯಿಂದ ಸೆಳೆದು ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯಿಂದ ಪ್ರತ್ಯೇಕವಾಗಿ ತೆರೆಯಲಾದ "KSUWSSB-ONE TIME ASSISTANCE TO BARBERS AND WASHERMEN" ಹೆಸರಿನ State Bank of India, Nimhans ಶಾಖೆಗೆ (ಉಳಿತಾಯ ಬ್ಯಾಂಕ್ ಖಾತೆ ಸಂಖ್ಯೆ:-39449019195"ಗೆ ) ಜಮಾ ಮಾಡುವಂತೆ ಆದೇಶಿಸಿದೆ.

...4

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 331 ವೆಚ್ಚ-9/2021, ದಿನಾಂಕ: 20/05/2021 ಹಾಗೂ 27/05/2021ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

ಪ್ರದೀಪ್ ಕುಮಾರ್

(ಪ್ರದೀಪ್ ಕುಮಾರ್ ಬಿ.ಎಸ್)
ಸರ್ಕಾರದ ಅಧೀನ ಕಾರ್ಯದರ್ಶಿ
ಕಾರ್ಮಿಕ ಇಲಾಖೆ.

**ಇವರಿಗೆ:**

1. ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು – ಈ ಆದೇಶವನ್ನು ಇ-ರಾಜ್ಯಪತ್ರದಲ್ಲಿ (E-Gazette) ಪ್ರಕಟಿಸಲು ಕೋರಿದೆ.
2. ಪ್ರಧಾನ ಮಹಾಲೇಖಪಾಲರು, (ಎ & ಇ) ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂ:5398, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಸಿ.ಅ.ಸು.ಇ. ಇಲಾಖೆ, (ಇ-ಆಡಳಿತ) ಬಹುಮಹಡಿ ಕಟ್ಟಡ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆ, ವಿಕಾಸಸೌಧ, ಬೆಂಗಳೂರು.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆ, ವಿಕಾಸಸೌಧ, ಬೆಂಗಳೂರು.
7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
9. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
10. ಸರ್ಕಾರದ ಪ್ರಧಾನ ಕಾರ್ಯದರ್ಶಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಬೆಂಗಳೂರು.
11. ಸರ್ಕಾರದ ಕಾರ್ಯದರ್ಶಿ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
12. ಸರ್ಕಾರದ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಇಲಾಖೆ, ವಿಕಾಸಸೌಧ, ಬೆಂಗಳೂರು.
13. ಸರ್ಕಾರದ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ, ವಿಕಾಸಸೌಧ, ಬೆಂಗಳೂರು.
14. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
15. ಆಯುಕ್ತರು, ಕಾರ್ಮಿಕ ಇಲಾಖೆ, ಬನ್ನೇರುಘಟ್ಟ ರಸ್ತೆ, ಬೆಂಗಳೂರು.
16. ಆಯುಕ್ತರು, ಖಜಾನೆ-2, ಗಾಂಧಿನಗರ, ಬೆಂಗಳೂರು.
17. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು (ಕಾರ್ಮಿಕ ಆಯುಕ್ತಾಲಯದ ಮುಖಾಂತರ)
18. ಎಲ್ಲಾ ಜಿಲ್ಲೆಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು (ಕಾರ್ಮಿಕ ಆಯುಕ್ತಾಲಯದ ಮುಖಾಂತರ).

...5

19. ಜಂಟಿ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ, ಬನ್ನೇರುಘಟ್ಟ ರಸ್ತೆ, ಬೆಂಗಳೂರು.
20. ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಕಾರ್ಮಿಕರ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ (ಆಶಾದೀಪ ಯೋಜನೆ) ಸೊಸೈಟಿ, ಬನ್ನೇರುಘಟ್ಟ ರಸ್ತೆ, ಬೆಂಗಳೂರು.
21. ನಿರ್ದೇಶಕರು, ಕಾರ್ಖಾನೆಗಳು, ಬಾಯ್ಲರ್‌ಗಳು, ಕೈಗಾರಿಕಾ ಸುರಕ್ಷತೆ ಮತ್ತು ಸ್ವಾಸ್ಥ್ಯ ಇಲಾಖೆ, ಬನ್ನೇರುಘಟ್ಟ ರಸ್ತೆ, ಬೆಂಗಳೂರು.
22. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-3 ಮತ್ತು 9), ವಿಧಾನ ಸೌಧ, ಬೆಂಗಳೂರು.

<u>ಪ್ರತಿಯನ್ನು ಮಾಹಿತಿಗಾಗಿ:-</u>

1) ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2) ಮಾನ್ಯ ಕಾರ್ಮಿಕ ಸಚಿವರ ಆಪ್ತ ಕಾರ್ಯದರ್ಶಿ, ಕಾರ್ಮಿಕ ಇಲಾಖೆ, ವಿಕಾಸ ಸೌಧ, ಬೆಂಗಳೂರು.
3) ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
4) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕಾರ್ಮಿಕ ಇಲಾಖೆ, ವಿಕಾಸ ಸೌಧ, ಬೆಂಗಳೂರು.
5) ಹೆಚ್ಚುವರಿ ಪ್ರತಿಗಳು / ಶಾಖಾ ರಕ್ಷಾ ಕಡತ.

# ಅನುಬಂಧ-1

**(ಸರ್ಕಾರದ ಆದೇಶ ಸಂಖ್ಯೆ: ಕಾಇ 221 ಎಲ್‌ಇಟಿ 2021, ದಿನಾಂಕ: 28/05/2021ರ ಆದೇಶಕ್ಕೆ)**

**Conditions:**

ಷರತ್ತುಗಳು:

1. With reference to examining/ verification of the applications in case of licensed establishments with more than 4 workers- inspection shall be mandatory and in case of non-licensed establishment if more than 2 workers register/ apply from same ship/ premises, inspection shall be compulsory.

   ಪರವಾನಗಿಯನ್ನು ಪಡೆದಿರುವ ಸಂಸ್ಥೆಯಲ್ಲಿ 4 (ನಾಲ್ಕು) ಕ್ಕಿಂತ ಹೆಚ್ಚು ಕಾರ್ಮಿಕರು ಕೆಲಸ ನಿರ್ವಹಿಸುತ್ತಿದ್ದು, ಅವರು ಅರ್ಜಿ ಸಲ್ಲಿಸಿದ್ದಲ್ಲಿ, ಕಡ್ಡಾಯವಾಗಿ ತಪಾಸಣೆಯನ್ನು ಕೈಗೊಳ್ಳುವುದು ಹಾಗೂ ಪರವಾನಗಿಯನ್ನು ಪಡೆಯದೇ ಕಾರ್ಯ ನಿರ್ವಹಿಸುತ್ತಿರುವ ಸಂಸ್ಥೆಯಿಂದ 2 (ಎರಡು) ಕ್ಕಿಂತ ಹೆಚ್ಚು ಫಲಾನುಭವಿಗಳು ಅರ್ಜಿ ಸಲ್ಲಿಸಿದಲ್ಲಿ ತಪಾಸಣೆ ಕಡ್ಡಾಯವಾಗಿರುತ್ತದೆ.

2. No separate advertisement expenses/ administrative expenses will be provided.

   ಜಾಹೀರಾತು ವೆಚ್ಚ / ಆಡಳಿತಾತ್ಮಕ ವೆಚ್ಚವನ್ನು ಬಿಡುಗಡೆ ಮಾಡಲಾಗುವುದಿಲ್ಲ.

3. The benefits of the scheme may be extended to workers from other states working in Karnataka.

   ಕರ್ನಾಟಕದಲ್ಲಿ ವೃತ್ತಿ ನಿರ್ವಹಿಸುತ್ತಿರುವ ಬೇರೆ ರಾಜ್ಯದ ಕಾರ್ಮಿಕರು ಸಹ ಪರಿಹಾರವನ್ನು ಪಡೆಯಲು ಅರ್ಹರು.

4. The benefit shall be restricted to one person from a family.

   ಒಂದು ಕುಟುಂಬದಲ್ಲಿ ಒಂದಕ್ಕಿಂತ ಹೆಚ್ಚು ಮಂದಿ ವೃತ್ತಿಯಲ್ಲಿ ತೊಡಗಿದ್ದಲ್ಲಿ, ಒಬ್ಬರು ಮಾತ್ರ ಪರಿಹಾರ ಧನವನ್ನು ಪಡೆಯಲು ಅರ್ಹರು.

5. All the applications shall only be received through Seva Sindhu portal. Approvals shall also be on Seva Sindhu.

   ಫಲಾನುಭವಿಗಳು ಸಲ್ಲಿಸುವ ಎಲ್ಲಾ ಅರ್ಜಿಗಳು ಸೇವಾ ಸಿಂಧು ಪೋರ್ಟಲ್ ಮೂಲಕವೇ ಸ್ವೀಕೃತವಾಗತಕ್ಕದ್ದು ಹಾಗೂ ಅದನ್ನು ಸೇವಾ ಸಿಂಧು ಪೋರ್ಟಲ್ ಮೂಲಕವೇ ಅಪ್ರೂವ್ ಮಾಡತಕ್ಕದ್ದು.

...2

6. All transfers to the beneficiaries shall be through DBT module by Aadhar verification/ authentication.

ಫಲಾನುಭವಿಗಳಿಗೆ ಪರಿಹಾರ ಧನವನ್ನು ಕಡ್ಡಾಯವಾಗಿ ಆಧಾರ್ ಆಧಾರಿತ ಡಿ.ಬಿ.ಟಿ. (ಡೈರೆಕ್ಟ್ ಬೆನಿಫಿಟ್ ಟ್ರಾನ್ಸ್ ಫರ್) ಮೂಲಕವೇ ವರ್ಗಾಯಿಸುವುದು / ದೃಢೀಕರಿಸುವುದು.

7. Age of the beneficiaries shall be restricted to those aged between 18 and 65 years.

ಅರ್ಜಿದಾರರ ವಯೋಮಿತಿಯನ್ನು 18-65 ವರ್ಷಗಳಿಗೆ ಸೀಮಿತಗೊಳಿಸಿದೆ.

8. The benefit of this scheme shall be restricted to BPL families.

ಈ ಯೋಜನೆಯ ಸೌಲಭ್ಯವನ್ನು ಬಡತನ ರೇಖೆಗಿಂತ ಕೆಳಗಿರುವ ಕುಟುಂಬಗಳಿಗೆ ಮಾತ್ರ ಸೀಮಿತಗೊಳಿಸಲಾಗಿದೆ.

ಪ್ರದೀಪ್ ಕುಮಾರ್

(ಪ್ರದೀಪ್ ಕುಮಾರ್ ಬಿ.ಎಸ್)
ಸರ್ಕಾರದ ಅಧೀನ ಕಾರ್ಯದರ್ಶಿ
ಕಾರ್ಮಿಕ ಇಲಾಖೆ.

# ಅನುಬಂಧ-2

**(ಸರ್ಕಾರದ ಆದೇಶ ಸಂಖ್ಯೆ: ಕಾಇ 221 ಎಲ್ಇಟಿ 2021, ದಿನಾಂಕ: 28/05/2021ರ ಆದೇಶಕ್ಕೆ)**

**ಕೋವಿಡ್-19ರ ಎರಡನೇ ಅಲೆಯ ಕಾರಣ ಲಾಕ್‌ಡೌನ್ ಜಾರಿಗೊಳಿಸಿದ ಹಿನ್ನೆಲೆಯಲ್ಲಿ, ಅಸಂಘಟಿತ ವಲಯದ ಹನ್ನೊಂದು ವರ್ಗಗಳ ಕಾರ್ಮಿಕರಿಗೆ ಒಂದು ಬಾರಿ ಪರಿಹಾರವಾಗಿ ರೂ.2000/-ಗಳ ನೆರವನ್ನು ಪಡೆಯಲು ಕೈಗೊಳ್ಳಬೇಕಾದ ಕ್ರಮದ ಕುರಿತು ಮಾರ್ಗಸೂಚಿ (SOP).**

## I. ಯೋಜನೆಯಡಿ ಫಲಾನುಭವಿಗಳು:

- ಅಸಂಘಟಿತ ವರ್ಗದ ಕಾರ್ಮಿಕರಾದ ಅಗಸರು, ಕ್ಷೌರಿಕರು, ಗೃಹಕಾರ್ಮಿಕರು, ಟೈಲರ್‌ಗಳು, ಮೆಕ್ಯಾನಿಕ್, ಚಿಂದಿ ಆಯುವವರು, ಹಮಾಲರು, ಅಕ್ಕಸಾಲಿಗರು, ಕಮ್ಮಾರರು, ಕುಂಬಾರರು ಹಾಗೂ ಭಟ್ಟಿಕಾರ್ಮಿಕ ವೃತ್ತಿಯಲ್ಲಿ ತೊಡಗಿರುವ ಕಾರ್ಮಿಕರು ಮಾತ್ರ.
- ಇವರಲ್ಲಿ, 2020ನೇ ಸಾಲಿನಲ್ಲಿ ಒಂದು ಬಾರಿಯ ನೆರವು ಪಡೆದ ಅಗಸರು ಮತ್ತು ಕ್ಷೌರಿಕ ಫಲಾನುಭವಿ ಕುಟುಂಬಗಳು ಮತ್ತೊಮ್ಮೆ ಪ್ರತ್ಯೇಕ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ. ಆದರೆ, ಸದರಿ ಸಾಲಿನಲ್ಲಿ ನೆರವು ಪಡೆಯದ ಅಗಸರು ಮತ್ತು ಕ್ಷೌರಿಕ ವೃತ್ತಿಯಲ್ಲಿ ತೊಡಗಿರುವ ಕುಟುಂಬದ ಒಬ್ಬ ಕಾರ್ಮಿಕರು ಅರ್ಜಿ ಸಲ್ಲಿಸಬಹುದು.
- ದಿನಾಂಕ:19-05-2021ರ ಅಂತ್ಯದವರೆಗೆ ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯಲ್ಲಿ ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆಯಡಿ ಅರ್ಜಿ ಸಲ್ಲಿಸಿ ನೋಂದಣಿಯಾದ ಬಿ.ಪಿ.ಎಲ್ ಕುಟುಂಬದ ಅಸಂಘಟಿತ ಕಾರ್ಮಿಕರು ಹಾಗೂ ಅವರ ಕುಟುಂಬಗಳ ಇತರೆ ಸದಸ್ಯರು ನೆರವು ಕೋರಿ ಮತ್ತೊಮ್ಮೆ ಪ್ರತ್ಯೇಕ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ. ಆದರೆ, ಸದರಿ ವರ್ಗಗಳ 60 ವರ್ಷ ಮೇಲ್ಪಟ್ಟ ಆದರೆ, 65 ವರ್ಷ ಪೂರೈಸದ ಕಾರ್ಮಿಕರು ಸಹ ಅರ್ಜಿ ಸಲ್ಲಿಸಬಹುದು.

## II. ನೆರವು ಪಡೆಯಲು ಅರ್ಹತೆ:

- ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಕಾಯ್ದೆ, 2008ರ ಕಲಂ 2 (ಎಂ)ರಡಿ ವಿವರಿಸಿದಂತೆ "ಅಸಂಘಟಿತ ಕಾರ್ಮಿಕ" ವ್ಯಾಖ್ಯಾನದಡಿ ಬರುವ ಕಾರ್ಮಿಕರಿಗೆ ಮಾತ್ರ ಈ ಸೌಲಭ್ಯ ಅನ್ವಯ. (ಇ.ಎಸ್.ಐ, ಇ.ಪಿ.ಎಫ್ ಕಾಯ್ದೆಯಡಿ ನೋಂದಾಯಿತ ಫಲಾನುಭವಿಗಳಾಗಿರಬಾರದು.)
- ವಯೋಮಿತಿ 18 ರಿಂದ 65 ವರ್ಷದೊಳಗಿರಬೇಕು.
- ಕುಟುಂಬದಲ್ಲಿ ಒಬ್ಬರು ಮಾತ್ರ ಪರಿಹಾರ ಧನವನ್ನು ಪಡೆಯಲು ಅರ್ಹರಿದ್ದು, ಒಬ್ಬರು ಮಾತ್ರ ಅರ್ಜಿ ಸಲ್ಲಿಸುವುದು.
- ಕೋವಿಡ್-19ರಡಿ ಕಟ್ಟಡ ಕಾರ್ಮಿಕರು ಹಾಗೂ ಘೋಷಿತ ಹನ್ನೊಂದು ವರ್ಗಗಳಲ್ಲಿ ಕೇವಲ ಒಂದು ವೃತ್ತಿಗೆ ಮಾತ್ರ ಕುಟುಂಬದಲ್ಲಿನ ಒಬ್ಬ ಸದಸ್ಯರು ಮಾತ್ರ ಪರಿಹಾರಕ್ಕಾಗಿ ಅರ್ಜಿ ಸಲ್ಲಿಸಲು ಅರ್ಹರು.
- ಬಡತನ ರೇಖೆಗಿಂತ ಕೆಳಗೆ ಇರುವ (ಬಿಪಿಎಲ್ ಕಾರ್ಡ್ ಹೊಂದಿರುವ) ಅಸಂಘಟಿತ ಕಾರ್ಮಿಕರು ಮಾತ್ರ ಪರಿಹಾರವನ್ನು ಪಡೆಯಲು ಅರ್ಹರು.

...2

- ಕರ್ನಾಟಕದಲ್ಲಿ ವೃತ್ತಿ ನಿರ್ವಹಿಸುತ್ತಿರುವ ಹೊರ ರಾಜ್ಯದ ಕಾರ್ಮಿಕರು ಸಹ ಪರಿಹಾರವನ್ನು ಪಡೆಯಲು ಅರ್ಹರಾಗಿರುತ್ತಾರೆ. ಆದರೆ, ಅಂತಹ ಫಲಾನುಭವಿ ಕಾರ್ಮಿಕರು ಕರ್ನಾಟಕ ಸರ್ಕಾರವು ನೀಡುವ ಬಿ.ಪಿ.ಎಲ್ ಕಾರ್ಡ್ ಹೊಂದಿರಬೇಕು.
- ಅರ್ಜಿ ಸಲ್ಲಿಸಿರುವ ಕಾರ್ಮಿಕರು ಮೇಲ್ಕಂಡ ವೃತ್ತಿ ನಿರ್ವಹಿಸುತ್ತಿರುವ ಕುರಿತು ಸಂಬಂಧಿಸಿದ ಅಧಿಕಾರಿಗಳಿಂದ ಪ್ರಮಾಣ ಪತ್ರ ಪಡೆದಿರಬೇಕು.
- ಆಧಾರ್ ಸಂಖ್ಯೆ ಜೋಡಣೆ ಆಗಿರುವ ಬ್ಯಾಂಕ್ ಖಾತೆ ಹೊಂದಿರಬೇಕು

**III. ಅರ್ಜಿ ಸಲ್ಲಿಸುವ ವಿಧಾನ:**

ಅರ್ಹ ಫಲಾನುಭವಿ ಕಾರ್ಮಿಕರು ಸೇವಾಸಿಂಧು ಪೋರ್ಟಲ್‌ನಲ್ಲಿ ಮಾತ್ರ ಅಗತ್ಯ ಮಾಹಿತಿ/ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸುವುದು:

a. ನಿಗದಿಪಡಿಸಿದ ಅರ್ಜಿ ನಮೂನೆಯಲ್ಲಿ ಮಾಹಿತಿಯನ್ನು ಭರ್ತಿ ಮಾಡುವುದು.
b. ಆಧಾರ್ ಕಾರ್ಡ್. (ಬ್ಯಾಂಕ್ ಖಾತೆಯೊಂದಿಗೆ ಜೋಡಣೆಯಾಗಿರುವುದು ಕಡ್ಡಾಯ).
c. ವಿಳಾಸ ದೃಢೀಕರಣ ಪತ್ರದ ಅಧಿಕೃತ ದಾಖಲೆ (ಅಪ್‌ಲೋಡ್ ಮಾಡುವುದು)
d. ಮೊಬೈಲ್ ಸಂಖ್ಯೆ (ಕಡ್ಡಾಯವಾಗಿ ನಮೂದಿಸುವುದು).
e. ಜನ್ಮ ದಿನಾಂಕ ನಮೂದಿಸಿರುವ ಪ್ರಮಾಣ ಪತ್ರ. (ಅಪ್‌ಲೋಡ್ ಮಾಡುವುದು)
f. ಬಿ.ಪಿ.ಎಲ್ ಸಂಖ್ಯೆ (ಅಪಲೋಡ್ ಮಾಡುವುದು.)
g. ಪಾಸ್‌ಪೋರ್ಟ್ ಅಳತೆಯ ಭಾವ ಚಿತ್ರ (ಅಪ್‌ಲೋಡ್ ಮಾಡುವುದು)
h. ಬ್ಯಾಂಕ್ ಖಾತೆಯ ವಿವರಗಳು. (ಖಾತೆ ಸಂಖ್ಯೆ, ಐ.ಎಫ್.ಎಸ್.ಸಿ ಸಂಖ್ಯೆ, ಖಾತೆದಾರರ ಹೆಸರು, ಬ್ಯಾಂಕ್ ಹೆಸರು ಹಾಗೂ ಶಾಖೆ.)
i. ಸ್ವಯಂ ಘೋಷಣೆ.
j. ಅರ್ಜಿದಾರರು ವೃತ್ತಿಯ ಕುರಿತು ಉದ್ಯೋಗ ಪ್ರಮಾಣ ಪತ್ರ (ಕೆಳಕಂಡ ಯಾವುದಾದರೊಂದು ಅಧಿಕಾರಿಯಿಂದ ದೃಢಿಕರಿಸಲ್ಪಟ್ಟಿರುವುದು). (ಮೂಲ ಪ್ರತಿಯನ್ನು ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡುವುದು).

**ಸೂಚನೆ:** ಈ ಕೆಳಗೆ ತಿಳಿಸಿರುವ ಉದ್ಯೋಗ ಪ್ರಮಾಣ ಪತ್ರ ವಿತರಿಸುವ ಅಧಿಕಾರಿಗಳು ಅರ್ಜಿದಾರರು/ಕಾರ್ಮಿಕರು ನಿಗದಿಪಡಿಸಿದ ವೃತ್ತಿ ನಿರ್ವಹಿಸುತ್ತಿರುವ ಬಗ್ಗೆ ಖಚಿತ ಪಡಿಸಿಕೊಂಡು ಪ್ರಮಾಣ ಪತ್ರ ವಿತರಿಸುವುದು.

1. ಬಿ.ಬಿ.ಎಂ.ಪಿ ವ್ಯಾಪ್ತಿಯ ವಾರ್ಡ್‌ಗಳ ಮಟ್ಟದಲ್ಲಿನ ಕಂದಾಯ ಅಧಿಕಾರಿ/ ಕಂದಾಯ ನಿರೀಕ್ಷಕರು / ಹಿರಿಯ ಆರೋಗ್ಯ ಅಧಿಕಾರಿಗಳು / ಆರೋಗ್ಯ ನಿರೀಕ್ಷಕರು
2. ಜಿಲ್ಲಾ ಹಾಗೂ ತಾಲ್ಲೂಕು ಕೇಂದ್ರಗಳಲ್ಲಿ ಮಹಾನಗರ ಪಾಲಿಕೆ/ನಗರ ಸಭೆ/ಪುರಸಭೆ/ಪಟ್ಟಣ ಪಂಚಾಯತಿಯ ಕಂದಾಯ ಅಧಿಕಾರಿ/ಕಂದಾಯ ನಿರೀಕ್ಷಕರು.

..3

3. ತಾಲ್ಲೂಕು ಮಟ್ಟದಲ್ಲಿ ಕಂದಾಯ ಇಲಾಖೆಯ ತಹಶೀಲ್ದಾರರು/ ಉಪ ತಹಶೀಲ್ದಾರರು/ ಕಂದಾಯ ಅಧಿಕಾರಿಗಳು/ ಕಂದಾಯ ನಿರೀಕ್ಷಕರು.
4. ಕಾರ್ಮಿಕ ಇಲಾಖೆಯ ಸಹಾಯಕ ಕಾರ್ಮಿಕ ಆಯುಕ್ತರು / ಕಾರ್ಮಿಕ ಅಧಿಕಾರಿಗಳು / ಹಿರಿಯ ಕಾರ್ಮಿಕ ನಿರೀಕ್ಷಕರು/ ಕಾರ್ಮಿಕ ನಿರೀಕ್ಷಕರು/.
5. ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಪಂಚಾಯತ್ ಅಭಿವೃದ್ಧಿ ಅಧಿಕಾರಿ / ಕಾರ್ಯದರ್ಶಿ.
6. ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿಯ ಅಧಿಕಾರಿಗಳು.
7. ಹಮಾಲಿ ವೃತ್ತಿಯಲ್ಲಿ ತೊಡಗಿಕೊಂಡ ಕಾರ್ಮಿಕರು ಮೇಲ್ಕಂಡ ಅಧಿಕಾರಿಗಳು ಅಥವಾ ತಾವು ಕೆಲಸ ನಿರ್ವಹಿಸುತ್ತಿರುವ ಇಲಾಖೆ/ಮಂಡಳಿ/ನಿಗಮದ ಅಧಿಕೃತ ಅಧಿಕಾರಿಗಳಿಂದ ಪ್ರಮಾಣ ಪತ್ರ ಪಡೆಯುವುದು.
8. ಯಾವುದೇ ಇಲಾಖೆಯ ಪತ್ರಾಂಕಿತ ಅಧಿಕಾರಿಗಳು (Gazetted Officers)

## IV. ಪರಿಶೀಲನಾ ಪ್ರಾಧಿಕಾರಿ ಹಾಗೂ ಪರಿಶೀಲನಾ ವಿಧಾನ :

- ಫಲಾನುಭವಿಗಳು ಸೇವಾ ಸಿಂಧು ಪೋರ್ಟಲ್ ಮೂಲಕ ಸಲ್ಲಿಸಿರುವ ಎಲ್ಲಾ ಅರ್ಜಿಗಳನ್ನು ಜಿಲ್ಲಾವಾರು ವಿಂಗಡಿಸಿ ಆಯಾ ಜಿಲ್ಲೆಗಳ ವ್ಯಾಪ್ತಿಯ ಕಾರ್ಮಿಕ ಇಲಾಖೆಯ ಜಿಲ್ಲಾ ಕಾರ್ಮಿಕ ಅಧಿಕಾರಿಗಳ ಲಾಗಿನ್‌ಗೆ ವರ್ಗಾಯಿಸಲಾಗುವುದು.

- ಎಲ್ಲಾ ಜಿಲ್ಲೆಗಳ **"ಕಾರ್ಮಿಕ ಅಧಿಕಾರಿ"**ಗಳು ಸ್ವೀಕರಿಸಿದ ಅರ್ಜಿಗಳನ್ನು ಮೇಲಿನ ಕ್ರಮ ಸಂಖ್ಯೆ III(j)ಯಲ್ಲಿ ನಮೂದಿಸಿರುವ ವಿವಿಧ ಇಲಾಖೆಗಳ ಅಧಿಕಾರಿಗಳು ನೀಡಿರುವ ಉದ್ಯೋಗ ದೃಢೀಕರಣದ ಆಧಾರದ ಮೇಲೆ ವೃತ್ತಿಯನ್ನು ನಿರ್ವಹಿಸುತ್ತಿರುವುದನ್ನು ಖಚಿತಪಡಿಸಿಕೊಳ್ಳುವುದು. ಅಗತ್ಯವಿದ್ದಲ್ಲಿ, ಹಿರಿಯ ಕಾರ್ಮಿಕ ನಿರೀಕ್ಷಕರು/ಕಾರ್ಮಿಕ ನಿರೀಕ್ಷಕರಿಂದ ದೃಢೀಕರಿಸಿಕೊಂಡು, ಅರ್ಜಿದಾರರು ಇತರೆ ಷರತ್ತುಗಳನ್ನು ಪೂರೈಸಿದ್ದಲ್ಲಿ ನೇರವಾಗಿ ಅರ್ಜಿಯನ್ನು ಅನುಮೋದಿಸುವುದು

- ನಿಯಮಾನುಸಾರ ಪರವಾನಗಿ ಪಡೆದ ಸಂಸ್ಥೆಯಾಗಿದ್ದು 04ಕ್ಕಿಂತ ಹೆಚ್ಚು ಕಾರ್ಮಿಕರು ಕೆಲಸ ನಿರ್ವಹಿಸುತ್ತಿದ್ದಲ್ಲಿ ಹಾಗೂ ಪರವಾನಿಗೆಯನ್ನು ಪಡೆಯದೇ ಕಾರ್ಯ ನಿರ್ವಹಿಸುವ ಸಂಸ್ಥೆಯಾಗಿದ್ದು 2 (ಎರಡು)ಕ್ಕಿಂತ ಹೆಚ್ಚು ಕಾರ್ಮಿಕರು ಕರ್ತವ್ಯ ನಿರ್ವಹಿಸುತ್ತಿದ್ದಲ್ಲಿ, ಸದರಿ ಸಂಸ್ಥೆಯನ್ನು ಕಾರ್ಮಿಕ ಇಲಾಖೆಯ ಹಿರಿಯ ಕಾರ್ಮಿಕ ನಿರೀಕ್ಷಕರು/ಕಾರ್ಮಿಕ ನಿರೀಕ್ಷಕರುಗಳಿಂದ ಪರಿಶೀಲಿಸಿ ವರದಿಯನ್ನು ಪಡೆದು ಕ್ರಮ ವಹಿಸುವುದು. ದೂರುಗಳು/ಆಕ್ಷೇಪಣೆಗಳೇನಾದರು ಬಂದಲ್ಲಿ, ಸ್ಥಳಕ್ಕೆ ಭೇಟಿ ನೀಡಿ ನಿಯಾಮಾನುಸಾರ ಪರಿಶೀಲಿಸಿ ಸಲ್ಲಿಸಿದ ವರದಿಯ ಆಧಾರದ ಮೇಲೆ ಕ್ರಮವಹಿಸುವುದು.

. .4

**V. ಸೇವಾ ಸಿಂಧು ಪೋರ್ಟ್‌ಲ್‌ನಲ್ಲಿ ಅರ್ಜಿಯ ಪ್ರಕ್ರಿಯೆ.**

a. 2020ನೇ ಸಾಲಿನಲ್ಲಿ ಒಂದು ಬಾರಿಯ ನೆರವು ಪಡೆದ ಅಗಸರು ಮತ್ತು ಕ್ಷೌರಿಕರಿಗೆ ಹಾಗೂ ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆಯಡಿ **ದಿನಾಂಕ:19-05-2021ರವರೆಗೆ ನೋಂದಣಿಯಾದ ಅರ್ಹ ಕಾರ್ಮಿಕರಿಗೆ** ಸಂಬಂಧಿಸಿದಂತೆ ಕುಟುಂಬದಲ್ಲಿ ಒಬ್ಬರಿಗೆ ನಿಯಮಾನುಸಾರ ಪ್ರಸ್ತುತ ಸಾಲಿನ ಒಂದು ಬಾರಿಯ ನೆರವನ್ನು ನೇರವಾಗಿ ಫಲಾನುಭವಿಗಳ ಆಧಾರ್ ಆಧಾರಿತ ಬ್ಯಾಂಕ್ ಖಾತೆಗೆ ನೇರ ನಗದು ವರ್ಗಾವಣೆ ಮಾಡುವುದು.

b. ಸಹಾಯಧನ ಪಡೆಯದ ಉಳಿದ ಫಲಾನುಭವಿಗಳು ಹಾಗೂ ಯೋಜನೆಯಡಿ ನೋಂದಣಿಯಾಗದ ಫಲಾನುಭವಿ ಕಾರ್ಮಿಕರು ಅರ್ಜಿಯನ್ನು ಸೇವಾ ಸಿಂಧು ಪೋರ್ಟ್‌ಲ್ ಮೂಲಕ ನಿಗದಿತ ದಾಖಲೆಗಳೊಂದಿಗೆ ಸಲ್ಲಿಸುವುದು.

c. ಅರ್ಜಿ ಸಲ್ಲಿಸಿದ ಪ್ರತಿ ಅರ್ಜಿದಾರರಿಗೆ ವಿಶಿಷ್ಠ ಗುರುತಿನ ಸಂಖ್ಯೆಯನ್ನು ಅರ್ಜಿದಾರರ ಮೊಬೈಲ್ ಸಂಖ್ಯೆಗೆ ಸಂದೇಶ ಕಳುಹಿಸುವುದು.

d. ನೋಂದಾಯಿತ ಅರ್ಜಿದಾರರು ವಿಶಿಷ್ಠ ಗುರುತಿನ ಸಂಖ್ಯೆಯನ್ನು ಬಳಸಿ ಸಲ್ಲಿಸಿದ ಅರ್ಜಿಯ ಸ್ಥಿತಿಯ ಕುರಿತು ಮಾಹಿತಿ ಪಡೆಯುವುದು.

e. ಸದರಿ ಅರ್ಜಿಯನ್ನು ಸಂಬಂಧಪಟ್ಟ ಜಿಲ್ಲಾ ಕಾರ್ಮಿಕ ಅಧಿಕಾರಿಗಳಿಗೆ ಮುಂದಿನ ಕ್ರಮಕ್ಕಾಗಿ ಕಳುಹಿಸುವುದು.

f. ಅರ್ಜಿದಾರರು ಕೋವಿಡ್-19ರಡಿ ಕಟ್ಟಡ ಕಾರ್ಮಿಕರನ್ನು ಒಳಗೊಂಡಂತೆ, ಯಾವುದಾದರು ಘೋಷಿತ ಹನ್ನೊಂದು ವರ್ಗಗಳಲ್ಲಿ ಕೇವಲ ಒಂದು ವೃತ್ತಿಗೆ ಮಾತ್ರ ಪರಿಹಾರಕ್ಕಾಗಿ ಅರ್ಜಿ ಸಲ್ಲಿಸುವುದು. ಒಬ್ಬನೇ ಅರ್ಜಿದಾರ ಒಂದಕ್ಕಿಂತ ಹೆಚ್ಚು ವೃತ್ತಿಗೆ ಅರ್ಜಿಗಳನ್ನು ಸಲ್ಲಿಸಿದಲ್ಲಿ, ಒಂದು ವೃತ್ತಿಗೆ ಮಾತ್ರ ನೆರವನ್ನು ಪಾವತಿಸಲು ಪರಿಗಣಿಸುವುದು ಹಾಗೂ ಕುಟುಂಬದಲ್ಲಿ ಒಬ್ಬರಿಗೆ ಮಾತ್ರ ಪರಿಹಾರ ಪಾವತಿಯಾಗುವಂತೆ ಇ-ಆಡಳಿತ ಇಲಾಖೆ/ಸೇವಾ ಸಿಂಧು/ವಿದ್ಯುನ್ಮಾನ ನಾಗರೀಕ ಸೇವಾ ವಿತರಣಾ ನಿರ್ದೇಶನಾಲಯ (EDCS) ಈ ಕುರಿತು ಆಧಾರ್ ಸಂಖ್ಯೆಯ ಆಧಾರದ ಮೇಲೆ ಕ್ರಮ ವಹಿಸುವುದು.

g. ಜಿಲ್ಲಾ ಕಾರ್ಮಿಕ ಅಧಿಕಾರಿಗಳು, ಸೂಕ್ತ ಪರಿಶೀಲನೆಯ ನಂತರ ಅರ್ಹ ಫಲಾನುಭವಿಗಳ ಅರ್ಜಿಗಳನ್ನು ಆನ್‌ಲೈನ್ ಮೂಲಕವೇ ಅನುಮೋದಿಸುವುದು ಹಾಗೂ ಕಾಲಕಾಲಕ್ಕೆ ವರದಿಯನ್ನು ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಗೆ ಸಲ್ಲಿಸುವುದು.

h. ಅನರ್ಹರೆಂದು ಕಂಡುಬಂದಲ್ಲಿ, ಸೂಕ್ತ ಕಾರಣಗಳೊಂದಿಗೆ ಅರ್ಜಿಯನ್ನು ತಿರಸ್ಕರಿಸುವುದು ಹಾಗೂ ತಿರಸ್ಕೃತಗೊಂಡ ಅರ್ಜಿದಾರರಿಗೆ ಸೇವಾ ಸಿಂಧು ಸಂಸ್ಥೆಯು ನಮೂದಿತ ಕಾರಣದೊಂದಿಗೆ ಅರ್ಜಿದಾರರ ಮೊಬೈಲ್ ಸಂಖ್ಯೆಗೆ ಮಾಹಿತಿ ರವಾನಿಸುವುದು.

i. ತಿರಸ್ಕರಿಸಿರುವ ಅರ್ಜಿಗಳ ಕುರಿತು ಫಲಾನುಭವಿಗಳು ಆಕ್ಷೇಪಣೆಗಳನ್ನು ಸಲ್ಲಿಸಿದಲ್ಲಿ, ಈ ಕುರಿತು ಕಾರ್ಯವ್ಯಾಪ್ತಿಯ ಸಹಾಯಕ ಕಾರ್ಮಿಕ ಆಯುಕ್ತರು ಪರಿಶೀಲಿಸಿ ಶೀಘ್ರವಾಗಿ ನಿರ್ಣಯ ಕೈಗೊಳ್ಳುವುದು.

j. ಅರ್ಹ ಫಲಾನುಭವಿಗಳಿಗೆ ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯು ಘೋಷಿತ ನೆರವನ್ನು ಫಲಾನುಭವಿಗಳ ಬ್ಯಾಂಕ್ ಖಾತೆಗೆ ಆಧಾರ್ ಆಧಾರಿತ ಡಿ.ಬಿ.ಟಿ. ಮೂಲಕ ವರ್ಗಾಯಿಸುವುದು.

## VI. ಜಿಲ್ಲಾ ಮಟ್ಟದ ಸಮಿತಿ:

ಜಿಲ್ಲಾ ಮಟ್ಟದ ಸಮಿತಿ.

| ಕ್ರ.ಸಂ. | ಅಧಿಕಾರಿಗಳು | ಪದನಾಮ |
|---|---|---|
| 01 | ಜಿಲ್ಲಾಧಿಕಾರಿಗಳು. | ಅಧ್ಯಕ್ಷರು |
| 02 | ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್. | ಉಪಾಧ್ಯಕ್ಷರು |
| 03 | ಯೋಜನಾ ನಿರ್ದೇಶಕರು, ನಗರಾಭಿವೃದ್ಧಿ ಕೋಶ. | ಸದಸ್ಯರು |
| 04 | ಜಂಟಿ ನಿರ್ದೇಶಕರು/ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ. | ಸದಸ್ಯರು |
| 05 | ಆಯುಕ್ತರು/ಮುಖ್ಯಾಧಿಕಾರಿಗಳು, ಮಹಾನಗರ ಪಾಲಿಕೆ/ನಗರ ಪಾಲಿಕೆ/ನಗರ ಸಭೆ/ಪುರಸಭೆ/ಪಟ್ಟಣ ಪಂಚಾಯತಿ. | ಸದಸ್ಯರು. |
| 06 | ಇ-ಆಡಳಿತ ಇಲಾಖೆ/ಸೇವಾ ಸಿಂಧುಗೆ ಸಂಬಂಧಿಸಿದ ಜಿಲ್ಲಾ ಮಟ್ಟದ ಅಧಿಕಾರಿ. | ಸದಸ್ಯರು |
| 07 | ನಿಗದಿಪಡಿಸಿದ ವೃತ್ತಿಯ ಕಾರ್ಮಿಕ ಸಂಘ/ಸಂಘಟನೆಯ ಸ್ಥಳೀಯ ಪ್ರತಿನಿಧಿ. (ಸಂಬಂಧಿಸಿದ ಅಸಂಘಟಿತ ಕಾರ್ಮಿಕ ವರ್ಗದಿಂದ ತಲಾ ಒಬ್ಬರು). | ಸದಸ್ಯರು. |
| 08 | ಜಿಲ್ಲಾ ವಾರ್ತಾ ಮತ್ತು ಪ್ರಚಾರ ಅಧಿಕಾರಿಗಳು. | ಸದಸ್ಯರು |
| 09 | ಜಿಲ್ಲಾಧಿಕಾರಿಗಳು/ಅಧ್ಯಕ್ಷರ ವಿವೇಚನೆ ಮೇರೆಗೆ ಆಯ್ಕೆ ಮಾಡಿದ ಗರಿಷ್ಠ ಇಬ್ಬರು ಸದಸ್ಯರು. | ಸದಸ್ಯರು |
| 10 | ಜಿಲ್ಲಾ ಮಟ್ಟದ ಅಧಿಕಾರಿ, ಕೃಷಿ ಉತ್ಪನ್ನ ಮಾರುಕಟ್ಟೆ ಇಲಾಖೆ. | ಸದಸ್ಯರು |
| 11 | ಜಿಲ್ಲಾ ಮಟ್ಟದ ಅಧಿಕಾರಿ, ಅಲ್ಪಸಂಖ್ಯಾತ/ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ. | ಸದಸ್ಯರು |
| 12 | ಜಿಲ್ಲಾ ಮಟ್ಟದ ಅಧಿಕಾರಿ, ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ. | ಸದಸ್ಯರು |
| 13 | ಕಾರ್ಮಿಕ ಅಧಿಕಾರಿ, ಕಾರ್ಮಿಕ ಇಲಾಖೆ. | ಸದಸ್ಯ ಕಾರ್ಯದರ್ಶಿ |

ಈ ಮೇಲ್ಕಂಡ ಸಮಿತಿಯು ಘೋಷಿತ ನೆರವಿನ ಅನುಷ್ಠಾನದ ಪ್ರಗತಿ ಪರಿಶೀಲನೆ, ಕ್ರಮ ಸಂಖ್ಯೆ III(j)ರಲ್ಲಿ ನಮೂದಿಸಿರುವ ಅಧಿಕಾರಿಗಳು ಉದ್ಯೋಗ ಪ್ರಮಾಣ ಪತ್ರ ನೀಡಲು ನಿರ್ದೇಶನ ಹಾಗೂ ಮೇಲ್ವಿಚಾರಣೆ, ಪ್ರಚಾರ, ಇತ್ಯಾದಿ ಕುರಿತು ಕಾಲ-ಕಾಲಕ್ಕೆ ಸಭೆ ಸೇರಿ ನಿರ್ಣಯ ಕೈಗೊಳ್ಳುವುದು.

## VII. ನೋಡಲ್ ಸಂಸ್ಥೆ:

ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯು ಕಾರ್ಮಿಕ ಆಯುಕ್ತರ ಮೇಲುಸ್ತುವಾರಿಯಲ್ಲಿ ಈ ಯೋಜನೆಯನ್ನು ಜಾರಿಗೊಳಿಸುವ ನೋಡಲ್ ಸಂಸ್ಥೆಯಾಗಿದ್ದು, ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳುವುದು:

1) ಯೋಜನೆಯ ಕುರಿತು ಫಲಾನುಭವಿಗಳಲ್ಲಿ ಅರಿವು ಮೂಡಿಸುವುದು.

...6

2) ಫಲಾನುಭವಿಗಳು ಅರ್ಜಿ ಸಲ್ಲಿಸಲು ಅನುಕೂಲವಾಗುವಂತೆ, ಅರ್ಹ ಫಲಾನುಭವಿಗಳಿಗೆ ಪರಿಹಾರ ವಿತರಿಸಲು ಸಮಿತಿ, ಬ್ಯಾಂಕ್ ಅಧಿಕಾರಿಗಳು ಹಾಗೂ ಸೇವಾಸಿಂಧು (ವಿದ್ಯುನ್ಮಾನ ನಾಗರಿಕ ಸೇವಾ ವಿತರಣಾ ನಿರ್ದೇಶನಾಲಯ) ನಿರ್ವಹಣಾ ಸಂಸ್ಥೆಯೊಂದಿಗೆ ಸಮನ್ವಯ ಸಾಧಿಸುವುದು.
3) ಅರ್ಜಿ ಸಲ್ಲಿಸಲು ದಿನಾಂಕ: 07/06/2021 ರವರೆಗೆ ಅಂತಿಮ ದಿನಾಂಕ ನಿಗದಿಪಡಿಸುವುದು.
4) ಪರಿಶೀಲನಾ ಪ್ರಾಧಿಕಾರಿಗಳಿಗೆ ಕಾಲಕಾಲಕ್ಕೆ ಸೂಕ್ತ ನಿರ್ದೇಶನ, ಸಲಹೆ ಹಾಗೂ ಸೂಚನೆಗಳನ್ನು ನೀಡುವುದು.

ಪ್ರದೀಪ್ ಕುಮಾರ್

*(ಪ್ರದೀಪ್ ಕುಮಾರ್ ಬಿ.ಎಸ್)*
ಸರ್ಕಾರದ ಅಧೀನ ಕಾರ್ಯದರ್ಶಿ
ಕಾರ್ಮಿಕ ಇಲಾಖೆ.